**RPAD**

# ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** **ಶ್ರೀ ವೆಂಕಟೇಶ(Dead), ಪಂಚಾಯತಿ ಅಭಿವೃದ್ಧಿ ಅಧಿಕಾರಿ, ತಗ್ಗಿಕುಪ್ಪೆ ಗ್ರಾಮ ಪಂಚಾಯತಿ, ಮಾಗಡಿ ತಾಲ್ಲೂಕು, ರಾಮನಗರ ಜಿಲ್ಲೆ ಇವರ ವಿರುದ್ಧ ಲೋಕಾಯುಕ್ತ ವಿಚಾರಣೆ ಕುರಿತು – ಅಂತಿಮ ಆದೇಶ ಹೊರಡಿಸುವ ಬಗ್ಗೆ– ಆದೇಶ.**

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/384/ಗ್ರಾಪಂಕಾ/2017, ದಿನಾಂಕ: 08–05–2017.
2. ಅಪರ ನಿಬಂಧಕರು, ವಿಚಾರಣೆಗಳು–10, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರು ಮಾನ್ಯ ಉಪಲೋಕಾಯುಕ್ತರಿಗೆ ಸಲ್ಲಿಸಿದ ವಿಚಾರಣಾ ವರದಿ ಸಂಖ್ಯೆ: Uplok-2/DE/708/2017/ARE-10, ದಿನಾಂಕ: 03.08.2017.
3. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಶಿಫಾರಸ್ಸು ಸಂಖ್ಯೆ: Uplok/DE/708/2017/ARE-10, ದಿನಾಂಕ: 19.08.2017.
4. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಪತ್ರ ಸಂಖ್ಯೆ: Uplok-2/DE/708/2017/ARE-10, ದಿನಾಂಕ: 21.08.2017.

**ಪ್ರಸ್ತಾವನೆ :**

ಮೇಲೆ ಕ್ರಮ ಸಂಖ್ಯೆ (1) ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಶ್ರೀ ವೆಂಕಟೇಶ (Dead), ಪಂಚಾಯತಿ ಅಭಿವೃದ್ಧಿ ಅಧಿಕಾರಿ, ತಗ್ಗಿಕುಪ್ಪೆ ಗ್ರಾಮ ಪಂಚಾಯತಿ, ಮಾಗಡಿ ತಾಲ್ಲೂಕು, ರಾಮನಗರ ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 14–ಎ ರಡಿಯಲ್ಲಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲಾಯಿತು. ಅದರಂತೆ ಅಪರ ನಿಬಂಧಕರು ವಿಚಾರಣೆಗಳು–10, ಕರ್ನಾಟಕ ಲೋಕಾಯುಕ್ತ ಇವರು ಸದರಿಯವರ ವಿರುದ್ಧ ಈ ಕೆಳಕಂಡ ಆರೋಪದ ಮೇಲೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 11ರ ಅಡಿಯಲ್ಲಿ ಇಲಾಖಾ ವಿಚಾರಣೆ ನಡೆಸಿರುತ್ತಾರೆ.

**"ದೋಷಾರೋಪಣೆ"**

> "ಆಪಾದಿತ ಸರ್ಕಾರಿ ನೌಕರರಾದ ಶ್ರೀ ವೆಂಕಟೇಶ, ಪಿ.ಡಿ.ಓ, ತಗ್ಗಿಕುಪ್ಪೆ ಗ್ರಾಮ ಪಂಚಾಯತಿ, ಮಾಗಡಿ ತಾಲ್ಲೂಕು, ರಾಮನಗರ ಜಿಲ್ಲೆ ರವರು ಆರ್.ಎಫ್.ಓ. ಶಿವಾನಂದ ಎನ್ನುವವರ ಜಮೀನಿಗೆ ಹೋಗಲು ಸಮೀಪದ ದಾರಿ ನಿರ್ಮಿಸುವ ಸಲುವಾಗಿ ದೂರುದಾರರ ಜಮೀನು ವಶಪಡಿಸಿಕೊಳ್ಳಲಾಗಿದೆ. ಭೂ ಸ್ವಾಧೀನ ಕಾಯಿದೆ ಕಲಂ 4(1) ಅಡಿಯಲ್ಲಿ ಕರ್ನಾಟಕ ರಾಜ್ಯ ಪತ್ರದಲ್ಲಿ ನೋಟಿಸು ಹಾಕಲಾಗಿದೆ. ಆಪಾದಿತ ಸರ್ಕಾರಿ ನೌಕರರು ದಿ:12.03.2012 ರಂದು ತಹಶೀಲ್ದಾರ್ ಮಾಗಡಿ ರವರಿಗೆ ಪತ್ರವನ್ನು ಬರೆದು ಸಾರ್ವಜನಿಕ ಜಮೀನಿಗೆ ಹೋಗಲು ಸ.ನಂ. 15/1ರ ಪಕ್ಕದಲ್ಲಿ ನಕಾಶೆ ಕಂಡ ದಾರಿ ಇದ್ದರೂ ಸಹ ಇದರ ಪಕ್ಕದಲ್ಲಿ ಯಾವುದೇ ಸರ್ಕಾರಿ ಜಮೀನು ಇಲ್ಲವೆಂದು ಸುಳ್ಳು ವರದಿಯನ್ನು ನೀಡಿರುತ್ತಾರೆ. ಆದ ಕಾರಣ ಆಪಾದಿತ ಸರ್ಕಾರಿ ನೌಕರರು ಸರ್ಕಾರಿ ಸೇವಕರಾಗಿದ್ದು, ಕರ್ತವ್ಯಪಾಲನೆಯಲ್ಲಿ ಪರಿಪೂರ್ಣ ಪ್ರಾಮಾಣಿಕತೆ, ಸಂಪೂರ್ಣ ಕರ್ತವ್ಯ ನಿಷ್ಠೆಯನ್ನು ತೋರಿಸದೇ ಸ್ವಂತ ಲಾಭಕ್ಕಾಗಿ ಸಾರ್ವಜನಿಕ ಸೇವಕರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡಿದ್ದು, ಆಪಾದಿತ ಸರ್ಕಾರಿ ನೌಕರರು ಕರ್ನಾಟಕ ಸರ್ಕಾರಿ ಸೇವಾ (ನಡತೆ) ನಿಯಮಾವಳಿ 1966ರ ನಿಯಮ 3(1)ನೇ ನಿಬಂಧನೆಯನ್ನು ಉಲ್ಲಂಘಿಸಿ ದುರ್ನಡತೆ ಎಸಗಿರುತ್ತಾರೆ".

ವಿಚಾರಣಾಧಿಕಾರಿಗಳು ಮೇಲೆ ಕ್ರಮ ಸಂಖ್ಯೆ (2) ರಲ್ಲಿ ಓದಲಾದ ವರದಿಯಲ್ಲಿ ಆಪಾದಿತ ನೌಕರರಾದ ಶ್ರೀ ವೆಂಕಟೇಶ, ಪಿ.ಡಿ.ಓ, ತಗ್ಗಿಕುಪ್ಪೆ ಗ್ರಾಮ ಪಂಚಾಯತಿ, ಮಾಗಡಿ ತಾಲ್ಲೂಕು, ರಾಮನಗರ ಜಿಲ್ಲೆ ರವರು ಮೃತ ಪಟ್ಟಿರುವುದಾಗಿ ವರದಿ ನೀಡಿರುತ್ತಾರೆಂದು ಅಪರ ನಿಬಂಧಕರು, ವಿಚಾರಣೆಗಳು–10 ರವರು ಮಾನ್ಯ ಉಪಲೋಕಾಯುಕ್ತರಿಗೆ ಸಲ್ಲಿಸಿರುವ ಪತ್ರದಲ್ಲಿ ತಿಳಿಸಿರುತ್ತಾರೆ.

ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ರವರು ಮೇಲೆ ಕ್ರಮ ಸಂಖ್ಯೆ (3) ರಲ್ಲಿ ಓದಲಾದ ವರದಿಯಲ್ಲಿ ಅಪರ ನಿಬಂಧಕರು, ವಿಚಾರಣೆಗಳು–10 ರವರು ಸಲ್ಲಿಸಿರುವ ವರದಿಯನ್ನು ಅಂಗೀಕರಿಸಿ ಶ್ರೀ ವೆಂಕಟೇಶ, ಪಿ.ಡಿ.ಓ, ತಗ್ಗಿಕುಪ್ಪೆ ಗ್ರಾಮ ಪಂಚಾಯತಿ, ಮಾಗಡಿ ತಾಲ್ಲೂಕು, ರಾಮನಗರ ಜಿಲ್ಲೆ ರವರು ದಿನಾಂಕ: 15–07–2016 ರಂದು ಮೃತಪಟ್ಟಿರುವುದರಿಂದ ಸದರಿಯವರ ವಿರುದ್ಧದ ವಿಚಾರಣೆಯನ್ನು ಕೈಬಿಡಲಾಗಿದೆ ಎಂದು ತಿಳಿಸಿರುವುದರಿಂದ ಸರ್ಕಾರವು ಆಪಾದಿತ ನೌಕರರ ವಿರುದ್ಧ ವಿಚಾರಣೆಯನ್ನು ಕೈಬಿಡಲು ನಿರ್ಣಯಿಸಿದೆ.

ಅದರಂತೆ ಈ ಆದೇಶ.

**<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 702 ಗ್ರಾಪಂಕಾ 2017, ಬೆಂಗಳೂರು, ದಿನಾಂಕ: 21–10–2017.</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಸರ್ಕಾರವು ಶ್ರೀ ವೆಂಕಟೇಶ, ಪಿ.ಡಿ.ಓ, ತಗ್ಗಿಕುಪ್ಪೆ ಗ್ರಾಮ ಪಂಚಾಯತಿ, ಮಾಗಡಿ ತಾಲ್ಲೂಕು, ರಾಮನಗರ ಜಿಲ್ಲೆ ರವರು ದಿನಾಂಕ:15–07–2016 ರಂದು ಮೃತಪಟ್ಟಿರುವುದರಿಂದ ಸದರಿಯವರ ವಿರುದ್ಧದ ವಿಚಾರಣೆಯನ್ನು ಕೈಬಿಡಲು ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**<u>ಗೆ,</u>**

1. ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ಅಪರ ನಿಬಂಧಕರು, ವಿಚಾರಣೆಗಳು–10, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ರಾಮನಗರ ಜಿಲ್ಲೆ.
6. ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತಿ, ಮಾಗಡಿ ತಾಲ್ಲೂಕು, ರಾಮನಗರ ಜಿಲ್ಲೆ– (ದಿವಂಗತ ಶ್ರೀ ವೆಂಕಟೇಶ, ಪಿ.ಡಿ.ಓ, ತಗ್ಗಿಕುಪ್ಪೆ ಗ್ರಾಮ ಪಂಚಾಯತಿ, ಮಾಗಡಿ ತಾಲ್ಲೂಕು, ರಾಮನಗರ ಜಿಲ್ಲೆ ರವರ ಕುಟುಂಬದವರಿಗೆ ಜಾರಿ ಮಾಡಿ ವರದಿ ನೀಡಲು ತಿಳಿಸಲಾಗಿದೆ)
7. ಗಣಕ ಕೋಶ.
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.